KUVEMPU UNIVERSITY
THE SOCIAL SCIENCE DIALOGUE
Peer Reviewed Open Access Journal
Prasaranga, Kuvempu University

# ಬೇಡ ಸಮುದಾಯದ ಮಕ್ಕಳ ಶೈಕ್ಷಣಿಕ ಸ್ಥಿತಿಗತಿ: ಚಿತ್ರದುರ್ಗ ಜಿಲ್ಲೆಯ ಅಧ್ಯಯನ

**ನೇತ್ರಾವತಿ ಬಿ.**
ಸಂಶೋಧನಾರ್ಥಿ
ಮಾನವಶಾಸ್ತ್ರ ಅಧ್ಯಯನ ವಿಭಾಗ
ಕನ್ನಡ ವಿಶ್ವವಿದ್ಯಾಲಯ ಹಂಪಿ, ಕರ್ನಾಟಕ

***ಸಾರಾಂಶ:*** *ಚಿತ್ರದುರ್ಗ ಜಿಲ್ಲೆಯ ಬೇಡ ನಾಯಕ ಸಮುದಾಯದ ಮಕ್ಕಳ ಶೈಕ್ಷಣಿಕ ಸ್ಥಿತಿಗತಿಯನ್ನು ತಿಳಿದುಕೊಳ್ಳುವ ಉದ್ದೇಶದಿಂದ ಪ್ರಸ್ತುತ ಅಧ್ಯಯನವನ್ನು ಕೈಗೊಳ್ಳಲಾಗಿದೆ. ಬೇಡ ನಾಯಕ ಸಮುದಾಯದ ಶೈಕ್ಷಣಿಕ ಮಟ್ಟ, ಸಾಕ್ಷರತಾ ಪ್ರಮಾಣ, ಸಮುದಾಯದ ಮಕ್ಕಳಿಗೆ ವಿದ್ಯಾಭ್ಯಾಸದಲ್ಲಿ ಅಡ್ಡಿಯಾಗಿರುವ ಅಂಶಗಳನ್ನು ಪತ್ತೆಮಾಡುವುದು ಅಧ್ಯಯನದ ಪ್ರಮುಖ ಉದ್ದೇಶಗಳಾಗಿದೆ. ಈ ಅಧ್ಯಯನಕ್ಕೆ ಚಿತ್ರದುರ್ಗ ಜಿಲ್ಲೆಯಲ್ಲಿನ 3 ತಾಲ್ಲೂಕುಗಳಿಂದ ತಲಾ 100 ಶಾಲೆಗಳಂತೆ, ಒಟ್ಟು 300 ಶಾಲೆಗಳನ್ನು ಆಯ್ದುಕೊಂಡಿದ್ದು, ಪ್ರತಿಶಾಲೆಯಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ಹಾಗೂ ಒಬ್ಬರು ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಅಧ್ಯಯನದ ಮಾಹಿತಿ ಸಂಗ್ರಹಕ್ಕಾಗಿ ಅನುಸೂಚಿಯನ್ನು ಬಳಸಿಕೊಳ್ಳಲಾಗಿದೆ. ಬೇಡ ನಾಯಕ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ಬಡತನ, ಆರೋಗ್ಯ ಪ್ರಮುಖ ಸಮಸ್ಯೆಗಳಾಗಿ ಪರಿಣಮಿಸಿರುವುದು ಅಧ್ಯಯನದಿಂದ ದೃಢಪಟ್ಟಿದೆ. ಸಮುದಾಯದ ವಿದ್ಯಾರ್ಥಿಗಳು ಬಾಲ್ಯ ವಿವಾಹ, ಅನಾರೋಗ್ಯ, ವಾಹನ ಸೌಲಭ್ಯದ ಕೊರತೆ, ಜೀವನ ನಿರ್ವಹಣೆ ಹಾಗೂ ಮನೆಯ ಕೆಲಸಕ್ಕಾಗಿ ಶಾಲೆಯನ್ನು ಬಿಟ್ಟಿರುವುದು ಬೆಳಕಿಗೆ ಬಂದಿದೆ.*

**ಮುಖ್ಯ ಪದಗಳು:** *ಬೇಡ ನಾಯಕ, ಬೇಡ ನಾಯಕ ಮಕ್ಕಳು, ಬೇಡ ನಾಯಕ ವಿದ್ಯಾರ್ಥಿಗಳು, ಚಿತ್ರದುರ್ಗ, ಶೈಕ್ಷಣಿಕ ಸ್ಥಿತಿಗತಿ, ಹಿಂದುಳಿದಿರುವಿಕೆ, ಸಾಕ್ಷರತಾ ಪ್ರಮಾಣ, ಶೈಕ್ಷಣಿಕ ಮಟ್ಟ*